ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.**

ಸಂಖ್ಯೆ: ಪಪೂಶಿ/ಶೈಶಾ-04/ವಿ.ಘ.ಕು/2018-19 ದಿನಾಂಕ: 23-05-2018.

ಜ್ಞಾಪನ

ವಿಷಯ: 2017-18ನೇ ಸಾಲಿಗೆ ರಾಜ್ಯದ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ನಡೆಸಲು ಕ್ರಮ ಕೈಗೊಳ್ಳುವ ಕುರಿತು.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ರವರ ಅರೆಸ ಪತ್ರ ಸಂಖ್ಯೆ: ಪ್ರಕಾ:ಪ್ರಾಪ್ರೌಶಿ:493/2018, ದಿನಾಂಕ: 07-05-2018.

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯು 2017-18ನೇ ಶೈಕ್ಷಣಿಕ ಸಾಲಿಗೆ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಮತ್ತು ದ್ವಿತೀಯ ಪಿಯುಸಿ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಧ್ಯಂತರ ರಜಾ ದಿನಗಳಲ್ಲಿ ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಗೊಳ್ಳಲಾಗಿತ್ತು.

ಉಲ್ಲೇಖಿತ ಪತ್ರದಲ್ಲಿ 2017-18ನೇ ಸಾಲಿನ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳ ವಿವರಗಳನ್ನು ವಿಶ್ಲೇಷಿಸಿ, ಅವರು ಈ ಹಿಂದೆ ಇಲಾಖೆಯಿಂದ ಏರ್ಪಡಿಸಿದ್ದ ಪರಿಹಾರ ಬೋಧನೆಯ ತರಬೇತಿಯನ್ನು ಪಡೆದಿರುತ್ತಾರೆಯೇ ಇಲ್ಲವೇ ಎಂಬುದನ್ನು ಖಚಿತ ಪಡಿಸಿ, ತರಬೇತಿಯನ್ನು ಪಡೆದಿದ್ದರೂ ಏಕೆ ಅನುತ್ತೀರ್ಣರಾದರು ಮತ್ತು ಪಡೆಯದೇ ಇದ್ದವರಿಗೆ ವಿಶೇಷ ತರಬೇತಿಯನ್ನು ಏರ್ಪಡಿಸಿ ಬರುವ ಪೂರಕ ಪರೀಕ್ಷೆಯಲ್ಲಿ ಅವರನ್ನು ಉತ್ತೀರ್ಣರಾಗುವಂತೆ ಸಿದ್ಧಪಡಿಸತಕ್ಕದ್ದು ಎಂದು ತಿಳಿಸಿರುತ್ತಾರೆ. ಅದರಂತೆ ತಮ್ಮ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡಿ ದ್ವಿತೀಯ ಪಿಯುಸಿಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಸರ್ಕಾರದ ಆದೇಶದಂತೆ ಉಚಿತವಾಗಿ ತರಗತಿಗಳನ್ನು ನಡೆಸಲು ಕ್ರಮ ವಹಿಸಿ ವಿದ್ಯಾರ್ಥಿಗಳು ಉತ್ತೀರ್ಣರಾಗಲು ಅವಕಾಶ ಮಾಡಿ ಕೊಡಬೇಕೆಂದು ಸೂಚಿಸಲಾಗಿದೆ.

far ನಿರ್ದೇಶಕರು, 23/5/18
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ),ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಮುಂದಿನ ಕ್ರಮಕ್ಕಾಗಿ
3. ನಿರ್ದೇಶಕರ ಆಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ
4. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
5. ಕಛೇರಿ ಪ್ರತಿ.